ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಬಾಗಿಲು ಮುಚ್ಚಿದ ಶುದ್ಧ ನೀರಿನ ಘಟಕಗಳು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

675 (702) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಾರಂಭದಿಂದ ಇದುವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ವರ್ಷವಾರು, ಜಿಲ್ಲಾವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಈ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕೆ ಸರ್ಕಾರ ಇದುವರೆಗೂ ಖರ್ಚು ಮಾಡಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿ ಕುಡಿಯುವ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದಾಗ್ಯೂ ಅವುಗಳನ್ನು ಅಧಿಕಾರಿಗಳು ಸರಿಯಾದ ರೀತಿಯಲ್ಲಿ ನಿರ್ವಹಿಸದೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ನಿರ್ಮಾಣ ಮಾಡಲಾದ ಈ ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳಲಾಗುವುದು ; (ಮಾಹಿತಿ ಒದಗಿಸುವುದು)

(ಉ) ಸ್ಥಾಪನೆಯಾದ ದಿನದಿಂದ ಶುದ್ಧ ನೀರಿನ ಘಟಕಗಳು ಇದುವರೆಗೂ ಕಾರ್ಯಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿ ಕಾರ್ಯಾರಂಭ ಮಾಡಿರುವ ಘಟಕಗಳು ರಾಜ್ಯಾದ್ಯಂತ ಎಷ್ಟಿವೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)